ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನ ವಾರಿಧಿ–6

## ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**11 ಜನವರಿ 2021 * ಸೋಮವಾರ * ಸಂಜೆ 6.00**

ದಿವ್ಯ ಸಾನ್ನಿಧ್ಯ

**ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಉಪನ್ಯಾಸ

**ಡಾ. ಗುರುರಾಜ ಕರ್ಜಗಿ**

ಖ್ಯಾತ ಶಿಕ್ಷಣ ತಜ್ಞರು ಹಾಗೂ ಅಂಕಣ ಬರಹಗಾರರು

ವಿಷಯ: ಮಹಾಭಾರತದ ಸೂಕ್ಷ್ಮ ಅವಲೋಕನ

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP http://jssonline.org

**ಜ್ಞಾನ ವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಕಲೆ, ಸಾಹಿತ್ಯ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಧರ್ಮ, ಅಧ್ಯಾತ್ಮ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಡಾ. ಗುರುರಾಜ ಕರ್ಜಗಿಯವರು** ನಾಡಿನ ಹಿರಿಯ ಶಿಕ್ಷಣ ತಜ್ಞರಲ್ಲೊಬ್ಬರು. ಬೆಂಗಳೂರಿನ ವಿ.ವಿ.ಎಸ್. ಕಾಲೇಜಿನಲ್ಲಿ ರಸಾಯನಶಾಸ್ತ್ರ ಪ್ರಾಧ್ಯಾಪಕರಾಗಿ ಮತ್ತು ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದಾರೆ. ಸೃಜನಶೀಲತೆ, ಸಂವಹನ ಕಲೆಯಿಂದ ಸಾಕಷ್ಟು ಜನಮನ್ನಣೆ ಗಳಿಸಿದ್ದಾರೆ. ಧನಾತ್ಮಕ ಚಿಂತನೆಗಳು, ಕಾರ್ಯಕ್ಷಮತೆ ಹಾಗೂ ಮಾನವೀಯ ಮೌಲ್ಯಗಳ ಕುರಿತ ಲೇಖನಗಳು ಮತ್ತು ಉಪನ್ಯಾಸಗಳ ಮೂಲಕ ದೇಶ–ವಿದೇಶಗಳಲ್ಲಿಯೂ ಚಿರಪರಿಚಿತರಾಗಿದ್ದಾರೆ. ಗುಣಮಟ್ಟದ ಶಿಕ್ಷಣ ಮತ್ತು ಶಿಕ್ಷಕರಿಗೆ ಉತ್ತಮ ತರಬೇತಿಯನ್ನು ನೀಡುವ ಉದ್ದೇಶ ಹೊಂದಿರುವ ಬೆಂಗಳೂರಿನ ಅಕಾಡೆಮಿ ಫಾರ್ ಕ್ರಿಯೇಟಿವ್ ಟೀಚಿಂಗ್‌ನ ಸಂಸ್ಥಾಪಕ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಎಲೆಕ್ಟ್ರೋಕೆಮಿಕಲ್ ಸೊಸೈಟಿ ಆಫ್ ಇಂಡಿಯಾದ ಲೈಫ್ ಫೆಲೋ ಆಗಿದ್ದಾರೆ. ಹಲವಾರು ಪ್ರತಿಷ್ಠಿತ ಶೈಕ್ಷಣಿಕ ಸಂಸ್ಥೆಗಳ, ವಿಶ್ವವಿದ್ಯಾನಿಲಯಗಳ ಮತ್ತು ಸರ್ಕಾರಿ ಸಮಿತಿಗಳ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಸ್ತುತ ಕರ್ನಾಟಕ ಜ್ಞಾನ ಆಯೋಗದ ವಿಶೇಷ ಸದಸ್ಯರಾಗಿದ್ದಾರೆ.

ಉತ್ತಮ ವಾಗ್ಮಿಗಳು ಹಾಗೂ ಪ್ರಸಿದ್ಧ ಅಂಕಣಕಾರರು. ಅವರ 1,500ಕ್ಕೂ ಹೆಚ್ಚು ಅಂಕಣಗಳು ನಾಡಿನ ಪತ್ರಿಕೆಗಳಲ್ಲಿ ಪ್ರಕಟವಾಗಿವೆ. “ಕರುಣಾಳು ಬಾ ಬೆಳಕೆ” ಶೀರ್ಷಿಕೆಯ ಅಂಕಣ ಬರಹಗಳು 12 ಸಂಪುಟಗಳಲ್ಲಿ ಪ್ರಕಟಗೊಂಡು ಬಹಳಷ್ಟು ಜನಪ್ರಿಯಗೊಂಡು, ಹಲವಾರು ಆವೃತ್ತಿಗಳನ್ನು ಕಂಡಿವೆ. ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜನ್ಮ ಶತಮಾನೋತ್ಸವದ ನೆನಪಿಗಾಗಿ 2016ರಲ್ಲಿ ಪ್ರಕಟವಾದ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ ಮೌಲ್ಯಯುತ ಲೇಖನಗಳನ್ನೊಳಗೊಂಡ ‘ಶಿಕ್ಷಣ ಶಿಲ್ಪ’ ಗ್ರಂಥವನ್ನು ಸಂಪಾದಿಸಿದ್ದಾರೆ. ಸೂಫಿ ತತ್ತ್ವ ಕುರಿತಾದ ಕೃತಿಯನ್ನು ಪ್ರಕಟಿಸಿದ್ದಾರೆ. ಪದವಿಪೂರ್ವ ತರಗತಿಗಳ ಪಠ್ಯಪುಸ್ತಕಗಳ ರಚನೆಯಲ್ಲೂ ತೊಡಗಿಸಿಕೊಂಡಿದ್ದಾರೆ. ಸೃಜನಶೀಲತೆಯಿಂದ ಕೂಡಿರುವ ಅವರ ಪಠ್ಯಕ್ರಮವನ್ನು ಯು.ಕೆ., ಅಮೆರಿಕ ಮತ್ತು ಆಸ್ಟ್ರಿಯಾದ ವಿವಿಧ ವಿಶ್ವವಿದ್ಯಾನಿಲಯಗಳಲ್ಲಿ ಅಳವಡಿಸಿಕೊಳ್ಳಲಾಗಿದೆ. ಭಾರತ ಮತ್ತು ವಿದೇಶಗಳ ಶೈಕ್ಷಣಿಕ ಮತ್ತು ಕಾರ್ಪೋರೇಟ್ ಸಂಸ್ಥೆಗಳಲ್ಲಿ 2000ಕ್ಕೂ ಹೆಚ್ಚು ತರಬೇತಿ ಕಾರ್ಯಕ್ರಮಗಳನ್ನು ನೀಡಿದ್ದಾರೆ.

ರಾಜ್ಯೋತ್ಸವ ಪ್ರಶಸ್ತಿ, ಕೆಂಪೇಗೌಡ ಪ್ರಶಸ್ತಿ, ಕನ್ನಡ ಸಾಹಿತ್ಯ ಪರಿಷತ್ತಿನ ಮರಿದೇವರು ದತ್ತಿ ಪ್ರತಿಷ್ಠಾನ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಜ್ಞಾನ ವಾರಿಧಿ–7 * 18 ಜನವರಿ 2021**

**ನಿ.ಪ್ರಸ್ವ. ಡಾ. ಶ್ರೀ ಶರತ್‌ಚಂದ್ರ ಸ್ವಾಮಿಗಳು**

ಶ್ರೀ ಕುಂದೂರು ಮಠ, ಮೈಸೂರು

ವಿಷಯ: ಆಧುನಿಕತೆ ಮತ್ತು ಧಾರ್ಮಿಕತೆ–ಸಮನ್ವಯ ದೃಷ್ಟಿ

**ಜ್ಞಾನ ವಾರಿಧಿ–8 * 25 ಜನವರಿ 2021**

**ಡಾ. ಮೈಸೂರು ಎಂ. ಮಂಜುನಾಥ್**

ಅಂತಾರಾಷ್ಟ್ರೀಯ ಖ್ಯಾತಿಯ ವಯೊಲಿನ್ ವಾದಕರು

ವಿಷಯ: ಭಾರತೀಯ ಸಂಗೀತದಲ್ಲಿ ವಯೊಲಿನ್